ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ/06/ಇಸಿಎಸ್(1)/2016

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳಿ,
ಅರಮನೆ ರಸ್ತೆ, ಬೆಂಗಳೂರು-1
ದಿನಾಂಕ:12-05-2017

ಸುತ್ತೋಲೆ

ವಿಷಯ: 2017 ಏಪ್ರಿಲ್/ಮೇ ಡಿಪ್ಲೋಮ ಸೆಮಿಸ್ಟರ್ ಥಿಯರಿ ಪರೀಕ್ಷೆಗಳಿಗೆ ಸಂಬಂಧಿಸಿದಂತೆ ನಿಗದಿಪಡಿಸಿದ ಸೂಕ್ತ ಕ್ರಮದಲ್ಲಿ ಪರೀಕ್ಷಾ ಕಾರ್ಯ ನಿರ್ವಹಿಸದಿರುವ ಪರೀಕ್ಷಾ ಕೇಂದ್ರಗಳ ಅಧಿಕಾರಿಗಳ ಮೇಲೆ ಶಿಸ್ತು ಕ್ರಮ ಜರುಗಿಸುವ ಕುರಿತು.

ಉಲ್ಲೇಖ: 1. ಈ ಕಛೇರಿ ಸುತ್ತೋಲೆ ಸಂಖ್ಯೆ: ಬಿಟಿಇ06/ಇಸಿಎಸ್(1)/2016 ದಿ:17-04-2017
2. ಸರ್ಕಾರಿ ಆದೇಶ ಸಂಖ್ಯೆ: ಇಡಿ 57 ಟಿಪಿಇ 2013 ದಿ:17-04-2015

***********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2017 ಏಪ್ರಿಲ್/ಮೇ ಡಿಪ್ಲೋಮ ಸೆಮಿಸ್ಟರ್ ಥಿಯರಿ ಪರೀಕ್ಷೆಗಳಿಗೆ ಸಂಬಂಧಿಸಿದಂತೆ ಪ್ರಾಚಾರ್ಯರು/ ಮುಖ್ಯ ಅಧೀಕ್ಷಕರು/ಮುಖ್ಯ ವೀಕ್ಷಕರು/ ಉಪಮುಖ್ಯ ಅಧೀಕ್ಷಕರು/ಕೊಠಡಿ ಮೇಲ್ವಿಚಾರಕರುಗಳು ಗಮನಿಸಬೇಕಾದ/ ಅನುಸರಿಸಬೇಕಾದ ಕ್ರಮಗಳ ಕುರಿತು ಉಲ್ಲೇಖಿತ ಸುತ್ತೋಲೆಯಲ್ಲಿ ವಿವರವಾಗಿ ತಿಳಿಸಲಾಗಿತ್ತು. ಆದಾಗ್ಯೂ ಹಲವಾರು ಪರೀಕ್ಷಾ ಕೇಂದ್ರಗಳು ಕೊಠಡಿ ಮೇಲ್ವಿಚಾರಣೆ ಹಾಗೂ ಉತ್ತರ ಪತ್ರಿಕೆಗಳ ಪ್ಯಾಕಿಂಗ್ ಸಂದರ್ಭದಲ್ಲಿ ನಿಗದಿಪಡಿಸಿದ ಸೂಕ್ತ ಕ್ರಮ ಅನುಸರಿಸದೇ ಕರ್ತವ್ಯ ಲೋಪವೆಸಗಿರುವುದು ಕಂಡುಬಂದಿರುತ್ತದೆ. ಇದರಿಂದಾಗಿ ಉತ್ತರ ಪತ್ರಿಕೆಗಳ ಕೋಡಿಂಗ್/ಮೌಲ್ಯಮಾಪನ ಮಾಡಿ ಫಲಿತಾಂಶ ನೀಡುವ ಕಾರ್ಯಕ್ಕೆ ತೀವ್ರ ತೊಂದರೆಯುಂಟಾಗಿರುತ್ತದೆ. **ಈ ರೀತಿ ಲೋಪ/ ದೋಷಗಳನ್ನು ಗಂಭೀರವಾಗಿ ಪರಿಗಣಿಸಿದ್ದು ಸಂಬಂಧಿಸಿದ ಪರೀಕ್ಷಾ ಕೇಂದ್ರಗಳ ಅಧಿಕಾರಿಗಳ ಮೇಲೆ ಉಲ್ಲೇಖ(2) ರ ಸರ್ಕಾರಿ ಆದೇಶದಂತೆ ಸೂಕ್ತ ಶಿಸ್ತು ಕ್ರಮ ಜರುಗಿಸಲಾಗುವುದೆಂದು ತಿಳಿಸಲಾಗಿದೆ. ಈ ಕುರಿತು ಎಲ್ಲಾ ಸಂಸ್ಥೆಗಳು ಸೂಕ್ತ ಎಚ್ಚರಿಕೆಯಿಂದ ಪರೀಕ್ಷಾ ಕಾರ್ಯ ನಿರ್ವಹಿಸಲು ತಿಳಿಸಲಾಗಿದೆ.**

ಕಾರ್ಯದರ್ಶಿ

ಇವರಿಗೆ,
ರಾಜ್ಯದ ಎಲ್ಲಾ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರು/ಉಪಮುಖ್ಯ ಅಧೀಕ್ಷಕರು/ವೀಕ್ಷಕರುಗಳಿಗೆ – ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ

ಪ್ರತಿ: 1. ಕಂಪ್ಯೂಟರ್ ವಿಭಾಗಕ್ಕೆ – ಬಿಟಿಇ ಲಿಂಕ್ಸ್ ವೆಬ್‌ಪೋರ್ಟಲ್‌ನಲ್ಲಿ ಪ್ರಕಟಿಸಲು
2. ಇ-ಗವರ್ನೆನ್ಸ್ ವಿಭಾಗ –ವೆಬ್‌ಸೈಟ್‌ನಲ್ಲಿ ಪ್ರಕಟಿಸಲು